ದಿನಾಂಕ: 22-09-2018

# ಪ್ರಕಟಣೆಗಾಗಿ

ಸರ್ಕಾರಿ ಪದವೀಧರ ಪ್ರಾಥಮಿಕ ಶಾಲೆಗಳ ಶಿಕ್ಷಕರ (6 ರಿಂದ 8ನೇ ತರಗತಿ) ವೃಂದದ ನೇಮಕಾತಿಯ 1:3 ಅನುಪಾತದ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 27-08-2018 ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಸದರಿ ಪರಿಶೀಲನಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನಾ ಕಾರ್ಯವು ಸಂಬಂಧಿತ ಜಿಲ್ಲೆಯ ಉಪನಿರ್ದೇಶಕರು (ಆಡಳಿತ)ರವರ ಹಂತದಲ್ಲಿ ಪೂರ್ಣಗೊಂಡಿದೆ. ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಕಂಡುಬಂದಂತಹ ತಿದ್ದುಪಡಿ ಮಾಡಬೇಕಾದ ಅಂಶಗಳನ್ನು ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರು ಕೇಂದ್ರೀಕೃತ ದಾಖಲಾತಿ ಘಟಕದಲ್ಲಿ ಸಲ್ಲಿಸಿ ತಿದ್ದುಪಡಿ ಮಾಡಿರುತ್ತಾರೆ. ಹಾಗೆ ತಿದ್ದುಪಡಿ ಮಾಡಲಾದ ದಾಖಲೆಗಳನ್ನು ಪುನ: ಪರಿಶೀಲಿಸಿ ಪಟ್ಟಿಗೆ ಪೂರ್ಣವಾಗಿ ಅಳವಡಿಸಿ 1:2 ಅನುಪಾತದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಜನರೇಟ್ ಮಾಡಿದ ನಂತರ 1:1 ಪಟ್ಟಿಯನ್ನು ಬಿಡುಗಡೆಗೊಳಿಸಬೇಕಾಗಿದೆ. ಸದರಿ ಪ್ರಕ್ರಿಯೆ ಅತ್ಯಂತ ಸೂಕ್ಷ್ಮವಾಗಿದ್ದು, ಹಲವಾರು ಹಂತಗಳಲ್ಲಿ ಅಡ್ಡ ಪರಿಶೀಲನೆಗೆ ಒಳಪಡಿಸಬೇಕಾಗಿರುವುದರಿಂದ ಮುಂದಿನ ವಾರದಲ್ಲಿ 1:2 ಅನುಪಾತದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗುವುದು.

ಸಹಿ/-

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ